೬೨

## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 828

ಮಾನ್ಯ ಸದಸ್ಯರ ಹೆಸರು : ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ),

ಉತ್ತರಿಸುವ ದಿನಾಂಕ : 13.03.2025

ಉತ್ತರಿಸುವವರು : ಮಾನ್ಯ ಮುಖ್ಯಮಂತ್ರಿಗಳು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಹೊಸ ಪಿಂಚಣಿ ಯೋಜನೆಗೆ (NPS) ಒಳಪಟ್ಟ ನೌಕರರ ಸಂಖ್ಯೆ ಎಷ್ಟು: | ದಿನಾಂಕ: 28.02.2025 ರವರೆಗೆ ರಾಷ್ಟ್ರೀಯ ಪಿಂಚಣಿ ಯೋಜನೆಗೆ (NPS) ಒಳಪಟ್ಟ ನೌಕರರ ಸಂಖ್ಯೆ: 2,86,445. |
| ಆ) | ಹೊಸ ಪಿಂಚಣಿ ಯೋಜನೆಗೆ ಒಳಪಟ್ಟ ಎಷ್ಟು ನೌಕರರು ಇಲ್ಲಿಯವರೆಗೆ ನಿವೃತ್ತರಾಗಿದ್ದಾರೆ: ಅವರು ಪಡೆಯುತ್ತಿರುವ ಕನಿಷ್ಠ ಮತ್ತು ಗರಿಷ್ಠ ಪಿಂಚಣಿ ಎಷ್ಟು: | ರಾಷ್ಟ್ರೀಯ ಪಿಂಚಣಿ ಯೋಜನೆಗೆ (NPS) ಒಳಪಟ್ಟ, CRA ರವರ ವರದಿಯಂತೆ ದಿ:31.01.2025 ರವರೆಗೆ ನೋಂದಣಿಯಾಗಿರುವ ನಿವೃತ್ತರಾಗಿರುವ ನೌಕರರ ಸಂಖ್ಯೆ: 2188.<br><br>ಸರ್ಕಾರಿ ಆದೇಶ ಸಂಖ್ಯೆ: ಆಇ 201 ಪಿಇಎನ್ 2021 ದಿ:29.11.2021ರನ್ವಯ ಎನ್.ಪಿ.ಎಸ್ ಯೋಜನೆಯಡಿ ನಿವೃತ್ತರಾಗುವ ಸಮಯದಲ್ಲಿ ಪ್ರಾನ್ ಖಾತೆಯಲ್ಲಿ 5 ಲಕ್ಷಕ್ಕಿಂತ ಕಡಿಮೆ ಮೊತ್ತವಿದ್ದರೆ ಸಂಪೂರ್ಣ ಮೊತ್ತವನ್ನು ನೌಕರರಿಗೆ CRA-Protean ರವರಿಂದ ಹಿಂದಿರುಗಿಸಲಾಗುವುದು. ಪ್ರಾನ್ ಖಾತೆಯಲ್ಲಿ 5 ಲಕ್ಷಕ್ಕಿಂತ ಹೆಚ್ಚಿನ ಮೊತ್ತವಿದ್ದರೆ ಪ್ರಾನ್ ಖಾತೆಯಲ್ಲಿ ಶೇ. 60% ರಷ್ಟು ಮೊತ್ತವನ್ನು ನೌಕರರಿಗೆ ಹಿಂದಿರುಗಿಸಲಾಗುವುದು ಹಾಗೂ ಉಳಿದ ಶೇ. 40% ರಷ್ಟು ಮೊತ್ತವನ್ನು ASP (Annuity Service provider) ಯಲ್ಲಿ ಹೂಡಿಕೆ ಮಾಡಿ ಮಾಸಿಕ ಪಿಂಚಣಿ ಪಡೆಯಬಹುದಾಗಿದೆ.<br><br>ನಿವೃತ್ತ ನೌಕರರು ಆಯ್ಕೆ ಮಾಡಿಕೊಂಡಿರುವ ASP (Annuity Service provider) ರವರಿಗೆ CRA-Protean ರವರಿಂದ ಶೇ.40 ಮೊತ್ತವನ್ನು ವರ್ಗಾಯಿಸಲಾಗುತ್ತದೆ, ಶೇ.40 ಮೊತ್ತದ ಪ್ರಮಾಣ ನಿವೃತ್ತ ನೌಕರರು ಆಯ್ಕೆ ಮಾಡುವ Annuity scheme ಅನ್ವಯ ASP ರವರು ಮಾಸಿಕ ಪಿಂಚಣಿಯನ್ನು ನಿಗದಿಪಡಿಸುತ್ತಾರೆ. |
| ಇ) | ಹಳೆ ಪಿಂಚಣಿ ಮರು ಜಾರಿಗೆ ಸರ್ಕಾರ ರಚಿಸಿರುವ ಸಮಿತಿಯು ಇಲ್ಲಿಯವರೆಗೆ | ರಾಜ್ಯದಲ್ಲಿ ಜಾರಿಯಲ್ಲಿರುವ ರಾಷ್ಟ್ರೀಯ ಪಿಂಚಣಿ ಯೋಜನೆಯ ಬದಲಾಗಿ ಹಳೆಯ ಪಿಂಚಣಿ |

| | | |
|---|---|---|
| | ಎಷ್ಟು ಸಭೆಗಳನ್ನು ನಡೆಸಿದೆ: ಎಷ್ಟು ರಾಜ್ಯಗಳಿಗೆ ತೆರಳಿ ಅಧ್ಯಯನ ನಡೆಸಿದೆ: ಸದರಿ ಸಮಿತಿಗೆ ವರದಿಯನ್ನು ನೀಡಲು ಎಷ್ಟು ಕಾಲಾವಕಾಶ ನೀಡಲಾಗಿದೆ: | ಯೋಜನೆಯನ್ನು ಜಾರಿಮಾಡುವ ಸಾಧ್ಯತೆಗಳ ಕುರಿತು ಪರಿಶೀಲಿಸಲು ಈಗಾಗಲೇ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ದಿನಾಂಕ: 11.12.2018ರ ಮತ್ತು ದಿನಾಂಕ: 01.03.2023 ರ ಸರ್ಕಾರಿ ಆದೇಶಗಳನ್ವಯ ರಚಿಸಲಾಗಿರುವ ಸಮಿತಿಯನ್ನು ದಿನಾಂಕ: 16.08.2024ರಲ್ಲಿ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ಪುನರ್ ರಚಿಸಿ ಆದೇಶಿಸಲಾಗಿದೆ.<br><br>ಸಮಿತಿಗೆ ಹಿಂದಿನ ಡಿಫೈನ್ಡ್ ಪಿಂಚಣಿ ಯೋಜನೆಯನ್ನು ಮರು ಜಾರಿ ಮಾಡಿರುವ ರಾಜ್ಯಗಳಲ್ಲಿ ಈ ಯೋಜನೆಯನ್ನು ಅನುಷ್ಠಾನಗೊಳಿಸಿರುವ ಕುರಿತು ಕೈಗೊಂಡಿರುವ ಕ್ರಮದ ಬಗ್ಗೆ ಅಧ್ಯಯನ ನಡೆಸಿ ವರದಿ ಸಲ್ಲಿಸಲು ಸೂಚಿಸಿದೆ.<br><br>ಸದರಿ ಸಮಿತಿಯು ಈಗಾಗಲೇ ಎರಡು ಸಭೆಗಳನ್ನು ನಡೆಸಿದೆ.<br><br>ಸದರಿ ಸಮಿತಿಗೆ ಯಾವುದೇ ಕಾಲಮಿತಿಯನ್ನು ನಿಗಧಿಪಡಿಸಿರುವುದಿಲ್ಲ. |
| ಈ) | 2006ಕ್ಕಿಂತ ಮೊದಲು ನೇಮಕಾತಿ ಅಧಿಸೂಚನೆ ಹೊರಡಿಸಿ ದಿನಾಂಕ: 01.04.2006 ನಂತರ ನೇಮಕಾತಿ ಹೊಂದಿದ್ದ ನೌಕರರಿಗೆ ಹಳೆ ಪಿಂಚಣಿ ಯೋಜನೆಯನ್ನು ಜಾರಿ ಮಾಡಿರುವಂತೆ ಹೊಸ ಪಿಂಚಣಿ ಯೋಜನೆ ನೌಕರರಿಗೂ ಜಾರಿ ಮಾಡುವ ಯೋಜನೆ ಸರ್ಕಾರದ ಮುಂದಿದೆಯೇ: | |
| ಉ) | ಶೀಘ್ರವಾಗಿ ಹಳೆ ಪಿಂಚಣಿ ಯೋಜನೆ ಜಾರಿ ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ? | |

ಆಇ-ಪಿಇಎನ್/ 95 /2025

(ಸಿದ್ದರಾಮಯ್ಯ)
**ಮುಖ್ಯಮಂತ್ರಿ**